ಕರ್ನಾಟಕ ಸರ್ಕಾರ

*ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.*

ಸಂಖ್ಯೆ:ಪಪೂಶಿ/ಶೈಶಾ-04/ಅಂ.ಅ.ತ.ರ.ವಾ/2013-14 ದಿನಾಂಕ:28.01.2014.

**ಸುತ್ತೋಲೆ**

ವಿಷಯ: ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧೀನ ಕಛೇರಿಗಳಲ್ಲಿನ ಸಾರ್ವಜನಿಕ ಕಟ್ಟಡಗಳಲ್ಲಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಅಂಗವಿಕಲರಿಗೆ ಅನುಕೂಲವಾಗವಂತಹ ಅಡೆ-ತಡೆ ರಹಿತ ವಾತಾವರಣವನ್ನು 30 ದಿನಗಳ ಒಳಗಾಗಿ ಒದಗಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ: ಇಡಿ 23ಯೊಸಕ 2013, ದಿನಾಂಕ: 29.11.2013.

2. ರಾಜ್ಯ ಆಯುಕ್ತರು, ರಾಜ್ಯ ಅಂಗವಿಕಲ ವ್ಯಕ್ತಿಗಳ ಆಯುಕ್ತರ ಕಛೇರಿ ಕರ್ನಾಟಕ ಇವರ ಪತ್ರ ಸಂಖ್ಯೆ: ಅಂಅನಿ/ಕಲಂ 46/60/2013-14/742, ದಿನಾಂಕ 11.11.2013.

******

ಮೇಲಿನ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಉಲ್ಲೇಖ-02 ಪತ್ರದಲ್ಲಿ ರಾಜ್ಯ ಆಯುಕ್ತರು, ರಾಜ್ಯ ಅಂಗವಿಕಲ ವ್ಯಕ್ತಿಗಳ ಆಯುಕ್ತರ ಕಛೇರಿ, ಕರ್ನಾಟಕ ಇವರು ಅಂಗವಿಕಲ ವ್ಯಕ್ತಿಗಳ (ಸಮಾನ, ಅವಕಾಶ, ಹಕ್ಕುಗಳ ಸಂರಕ್ಷಣೆ ಮತ್ತು ಪೂರ್ಣಭಾಗವಹಿಸುವಿಕೆ) ಅದಿನಿಯಮದ ಅಧ್ಯಾಯ-8ರಲ್ಲಿ ವಿವರಸಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ಅಂಗವಿಕಲರಿಗೆ ಅನುಕೂಲವಾಗವಂತಹ ಅಡೆ-ತಡೆ ರಹಿತ ವಾತಾವರಣವನ್ನು ಒದಗಿಸುವುದು ಅತ್ಯವಶ್ಯಕವಾಗಿರುವುದರಿಂದ ಇಲಾಖೆಯ ಕೇಂದ್ರ ಕಛೇರಿಯಲ್ಲಿ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಅಧೀನ ಕಛೇರಿಗಳಲ್ಲಿನ ಕಟ್ಟಡಗಳಲ್ಲಿ ಸಾರ್ವಜನಿಕ ಕಟ್ಟಡಗಳಲ್ಲಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಅಂಗವಿಕಲರಿಗೆ ಅನುಕೂಲವಾಗವಂತಹ ಅಡೆ-ತಡೆ ರಹಿತ ವಾತಾವರಣವನ್ನು 30 ದಿನಗಳ ಒಳಗಾಗಿ ಕ್ರಮವಹಿಸಲು ಸೂಚಿಸಿರುತ್ತಾರೆ. ಅದರಂತೆ ತಮ್ಮ ಕಛೇರಿಯಲ್ಲಿ ಹಾಗೂ ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿನ ಪದವಿ ಪೂರ್ವ ಕಾಲೇಜುಗಳಿಗೆ ಈ ಕುರಿತು ಕೂಡಲೇ ಸೂಕ್ತ ಕ್ರಮ ಜರುಗಿಸುವಂತೆ ಪ್ರಾಂಶುಪಾಲರುಗಳಿಗೆ ಆದ್ಯತೆಯ ಮೇರೆಗೆ ಕ್ರಮಕೈಗೊಂಡು ಕೈಗೊಂಡ ಕ್ರಮದ ಬಗ್ಗೆ. ಈ ಕಛೇರಿಗೆ ವರದಿ ನೀಡಲು ಸೂಚಿಸಿದೆ.

ನಿರ್ದೇಶಕರು.
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿ

1. ರಾಜ್ಯದ ಎಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆಯ ಜಿಲ್ಲಾ ಉಪನಿರ್ದೇಶಕರಿಗೆ.
2. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರಿಗೆ - ಜಿಲ್ಲಾ ಉಪನಿರ್ದೇಶಕರ ಮೂಲಕ ಮುಂದಿನ ಕ್ರಮಕ್ಕಾಗಿ. . .
3. ಜಂಟಿ ನಿರ್ದೇಶಕರು, (ಪರೀಕ್ಷೆ/ಆಡಳಿತ/ಶೈಕ್ಷಣಿಕ/ ಮಾನ್ಯತೆ/RIDF) ಪದವಿ ಪೂರ್ವ ಶಿಕ್ಷಣ ಇಲಾಖೆ, ಮಾಹಿತಿಗಾಗಿ.
4. ಉಪನಿರ್ದೇಶಕರು,(ಆಡಳಿತ/ ಮಾನ್ಯತೆ/ ಶೈಕ್ಷಣಿಕ/ ಪರೀಕ್ಷೆ) ಪದವಿ ಪೂರ್ವ ಶಿಕ್ಷಣ ಇಲಾಖೆ, ಮಾಹಿತಿಗಾಗಿ.
5. ನಿರ್ದೇಶಕರ ಅಪ್ತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ಮಾಹಿತಿಗಾಗಿ
6. ಇ-ಅಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ.
7. ಕಛೇರಿ ಪ್ರತಿ